# ಯೋವೇಲ

## ಮಿಡಿತೆಗಳು ಬೆಳೆಯನ್ನು ನಾಶಮಾಡುವವು

1 ಪೆತೂವೇಲನ ಮಗನಾದ ಯೋವೇಲನು ಯೆಹೋವನಿಂದ ಈ ಸಂದೇಶವನ್ನು ಪಡೆದನು.

2 ನಾಯಕರೇ, ಈ ಸಂದೇಶಕ್ಕೆ ಕಿವಿಗೊಡಿರಿ. ದೇಶದಲ್ಲಿ ವಾಸಿಸುವ ಎಲ್ಲಾ ಜನರೇ, ನನ್ನ ಮಾತುಗಳನ್ನು ಆಲೈಸಿರಿ. ನಿಮ್ಮ ಜೀವಮಾನಕಾಲದಲ್ಲಿ ಇಂಥಾ ಸಂಗತಿ ಎಂದಾದರೂ ಸಂಭವಿಸಿದೆಯೋ? ಇಲ್ಲ! ನಿಮ್ಮ ತಂದೆಗಳ ಕಾಲದಲ್ಲಿ ಯಾದರೂ ಇಂಥಾ ಸಂಗತಿಗಳು ಸಂಭವಿಸಿದೆಯೋ? ಇಲ್ಲ!

3 ಇವುಗಳನ್ನು ನೀವು ನಿಮ್ಮ ಮಕ್ಕಳಿಗೆ ತಿಳಿಸುವಿರಿ. ಮತ್ತು ನಿಮ್ಮ ಮಕ್ಕಳು ಅವರ ಮಕ್ಕಳಿಗೆ ತಿಳಿಸುವರು. ಮತ್ತು ನಿಮ್ಮ ಮೊಮ್ಮಕ್ಕಳು ಅವರ ನಂತರದ ಪೀಳಿಗೆಗೆ ತಿಳಿಸುವರು.

4 ಚೂರಿ ಮಿಡಿತೆ ತಿಂದು ಬಿಟ್ಟದ್ದನ್ನು ಗುಂಪು ಮಿಡಿತೆ ತಿಂದಿತು. ಗುಂಪು ಮಿಡಿತೆ ತಿಂದು ಬಿಟ್ಟದ್ದನ್ನು ಹಾರುವ ಮಿಡಿತೆ ತಿಂದಿತು. ಹಾರುವ ಮಿಡಿತೆ ತಿಂದು ಉಳಿದದ್ದನ್ನು ನಾಶಮಾಡುವ ಮಿಡಿತೆ ತಿಂದು ಬಿಟ್ಟಿತು.

## ಮಿಡಿತೆಗಳು ಆಗಮಿಸಿದವು

5 ಅಮಲೇರಿದವರೇ, ಎಚ್ಚರಗೊಂಡು ಅಳಿರಿ. ದ್ರಾಕ್ಷಾರಸವನ್ನು ಕುಡಿಯುವವರೇ, ಅಳಿರಿ. ಯಾಕೆಂದರೆ ನಿಮ್ಮ ಸಿಹಿಯಾದ ದ್ರಾಕ್ಷಾರಸವು ಮುಗಿದು ಹೋಯಿತು. ಆ ದ್ರಾಕ್ಷಾರಸದ ಸವಿಯು ನಿಮಗೆ ಇನ್ನು ಸಿಗದು.

6 ನನ್ನ ಜನಾಂಗಕ್ಕೆ ವಿರುದ್ಧವಾಗಿ ಬಲಶಾಲಿಯಾದ ದೊಡ್ಡ ರಾಜ್ಯವು ಯುದ್ಧಕ್ಕೆ ಬರುವದು. ಅವರ ಸೈನಿಕರನ್ನು ಲೆಕ್ಕಿಸಲು ಸಾಧ್ಯವಿಲ್ಲ. ಆ ಮಿಡಿತೆಗಳಂತಿರುವ ಸೈನಿಕರು ನಿಮ್ಮನ್ನು ಸೀಳಿಬಿಡುವರು. ಅವರ ಹಲ್ಲುಗಳು ಸಿಂಹದ ಹಲ್ಲಿನಂತಿವೆ.

7 ಆ ಮಿಡಿತೆಗಳು ನನ್ನ ದ್ರಾಕ್ಷಿತೋಟದ ಹಣ್ಣುಗಳನ್ನೆಲ್ಲಾ ತಿಂದುಬಿಡುವವು. ನನ್ನ ಅಂಜೂರದ ಮರಗಳನ್ನು ನಾಶ ಮಾಡುವವು. ನನ್ನ ಮರಗಳ ತೊಗಟೆಗಳನ್ನು ಮಿಡಿತೆಗಳು ತಿಂದು ಬಿಡುವವು. ಅದರ ಕೊಂಬೆಗಳು ಬಿಳುಪಾಗುವವು. ಮರಗಳು ನಾಶವಾಗುವವು.

## ಜನರು ಬೊಬ್ಬಿಡುತ್ತಾರೆ

8 ಮದುವೆಯಾಗಲಿಕ್ಕಿರುವ ಗಂಡನು ಸತ್ತ ವಧುವು ಬೊಬ್ಬಿಡುವಂತೆ ನೀವು ಬೊಬ್ಬಿಡಿರಿ.

9 ಯಾಜಕರೇ, ಯೆಹೋವನ ಸೇವಕರೇ, ಬೊಬ್ಬಿಡಿರಿ. ಯಾಕಂದರೆ ಇನ್ನು ಮುಂದೆ ಯೆಹೋವನ ಆಲಯದಲ್ಲಿ ಪಾನ ಮತ್ತು ಧಾನ್ಯಾರ್ಪಣೆ ಇರದು.

10 ಹೊಲ ಗದ್ದೆಗಳೆಲ್ಲಾ ನಾಶವಾದವು. ಭೂಮಿಯೂ ಗೋಳಾಡುತ್ತಿರುವುದು. ಯಾಕೆಂದರೆ ಧಾನ್ಯವು ನಾಶವಾದವು. ಹೊಸ ದ್ರಾಕ್ಷಾರಸವು ಬತ್ತಿಹೋಯಿತು. ಎಣ್ಣೆಯು ಇಲ್ಲದೆ ಹೋಯಿತು.

11 ರೈತರೇ, ದುಃಖಿಸಿರಿ, ದ್ರಾಕ್ಷಿತೋಟ ಮಾಡಿದವರೇ, ಗಟ್ಟಿಯಾಗಿ ಬೊಬ್ಬಿಡಿರಿ. ಗೋಧಿಗಾಗಿಯೂ, ಜವೆಗೋಧಿಗಾಗಿಯೂ ಅಳಿರಿ. ಯಾಕಂದರೆ ಬೆಳೆಯು ನಾಶವಾಯಿತು.

12 ದ್ರಾಕ್ಷಿ ಬಳ್ಳಿಗಳು ಒಣಗಿ ಹೋಗಿವೆ ಮತ್ತು ಅಂಜೂರದ ಮರವು ಸಾಯುತ್ತಲಿದೆ. ದಾಳಿಂಬದ ಮರ, ಖರ್ಜೂರದ ಮರ, ಸೇಬಿನ ಮರ, ತೋಟದಲ್ಲಿರುವ ಎಲ್ಲಾ ಮರಗಳು ಒಣಗಿ ಹೋಗಿವೆ. ಜನರಲ್ಲಿರುವ ಸಂತೋಷವೂ ಬತ್ತಿಹೋಗಿದೆ.

13 ಯಾಜಕರೇ, ನೀವು ನಿಮ್ಮ ಶೋಕವಸ್ತ್ರವನ್ನು ಧರಿಸಿ ಗಟ್ಟಿಯಾಗಿ ರೋಧಿಸಿರಿ. ವೇದಿಕೆಯಲ್ಲಿ ಸೇವೆ ಮಾಡುವವರೇ, ಗಟ್ಟಿಯಾಗಿ ರೋಧಿಸಿರಿ. ನನ್ನ ದೇವರ ಸೇವಕರೇ, ನೀವು ನಿಮ್ಮ ಶೋಕ

ವಸ್ತ್ರಗಳಲ್ಲಿಯೇ ನಿದ್ರೆ ಮಾಡಿರಿ. ಯಾಕೆಂದರೆ
ಇನ್ನು ದೇವಾಲಯದಲ್ಲಿ ಧಾನ್ಯ ಮತ್ತು ಪಾನ
ಸಮರ್ಪಣೆ ಇಲ್ಲ.

### ಮಿಡಿತೆಗಳ ಭಯಂಕರ ನಾಶನ

14 ಉಪವಾಸ ದಿನವನ್ನು ಗೊತ್ತುಪಡಿಸಿರಿ. ಆ ದಿನಕ್ಕಾಗಿ
ಜನರನ್ನು ಒಟ್ಟುಗೂಡಿಸಿರಿ. ದೇಶದಲ್ಲಿ ವಾಸವಾಗಿರುವ
ನಾಯಕರುಗಳೆಲ್ಲರನ್ನೂ ಜನರನ್ನೂ ಒಟ್ಟುಗೂಡಿಸಿರಿ;
ನಿಮ್ಮ ದೇವರಾದ ಯೆಹೋವನ ಆಲಯಕ್ಕೆ ಅವರನ್ನೆಲ್ಲ
ಪ್ರಾರ್ಥನೆಗಾಗಿ ಕರೆದುಕೊಂಡು ಬನ್ನಿರಿ.
15 ಶೋಕಿಸಿರಿ. ಯಾಕೆ? ಯಾಕೆಂದರೆ ಯೆಹೋವನ
ಮಹಾದಿನವು ಹತ್ತಿರ ಬಂತು. ಆ ಸಮಯದಲ್ಲಿ ಸರ್ವಶಕ್ತ
ನಾದ ದೇವರ ಸನ್ನಿಧಾನದಿಂದ ದಂಡನೆಯು ಬರುವುದು.
16 ನಮಗೆ ಆಹಾರವು ಇಲ್ಲದೆ ಹೋಯಿತು. ಆನಂದವೂ
ಸಂತೋಷವೂ ನಮ್ಮ ದೇವಾಲಯದಿಂದ ಹೊರಟು
ಹೋದವು. 17 ನಾವು ಬೀಜ ಬಿತ್ತಿದೆವು. ಆದರೆ ಅವು
ಒಣಗಿ, ಸತ್ತು ಈಗ ನೆಲದ ಮೇಲೆ ಬಿದ್ದಿವೆ. ನಮ್ಮ ಗಿಡಗ
ಳೆಲ್ಲಾ ಒಣಗಿ ಸತ್ತಿವೆ. ನಮ್ಮ ಉಗ್ರಾಣವು ಬರಿದಾಗಿದ್ದು
ಬೀಳುತ್ತಲಿದೆ.
18 ಪ್ರಾಣಿಗಳು ಹಸಿವಿನಿಂದ ನರಳಾಡುತ್ತಿವೆ. ಪ್ರಾಣಿ ಗಳ
ಹಿಂಡು ಗಲಿಬಿಲಿಗೊಂಡು ಅಡ್ಡಾಡುತ್ತವೆ. ಅವುಗಳಿಗೆ
ತಿನ್ನಲು ಹುಲ್ಲು ಇಲ್ಲ. ಕುರಿಗಳು ಸಾಯುತ್ತಿವೆ.
19 ಯೆಹೋವನೇ, ಸಹಾಯಕ್ಕಾಗಿ ನಾನು ನಿನಗೆ ಮೊರೆ
ಯಿಡುತ್ತಿದ್ದೇನೆ. ನಮ್ಮ ಹಸಿರು ಹೊಲಗದ್ದೆಗಳು ಬೆಂಕಿ
ಯಿಂದ ಮರುಭೂಮಿಯಾದವು. ಹೊಲದಲ್ಲಿದ್ದ ಮರ
ಗಳನ್ನೆಲ್ಲಾ ಬೆಂಕಿಯು ದಹಿಸಿತು. 20 ಕಾಡು ಪ್ರಾಣಿಗಳೂ
ಬಾಯಾರಿ ನಿನ್ನ ಕಡೆಗೆ ನೋಡುತ್ತಿವೆ. ನೀರಿನ ತೊರೆಗಳು
ಬತ್ತಿ ಹೋಗಿವೆ. ನೀರೇ ಇಲ್ಲ. ನಮ್ಮ ಹಸಿರು ಹುಲ್ಲು
ಗಾವಲು ಬೆಂಕಿಯ ದೆಸೆಯಿಂದ ಮರುಭೂಮಿ
ಯಾಗಿರುತ್ತದೆ.

### ಬರಲಿಕ್ಕಿರುವ ಯೆಹೋವನ ದಿನ

2 ಚೀಯೋನಿನಲ್ಲಿ ತುತ್ತೂರಿಯನ್ನೂದು. ನನ್ನ
ಪವಿತ್ರ ಪರ್ವತದಲ್ಲಿ ಧ್ವನಿಯೆತ್ತಿ ಎಚ್ಚರಿಕೆ
ನೀಡಿರಿ. ದೇಶದಲ್ಲಿ ವಾಸಿಸುವ ಎಲ್ಲಾ ಜನರು
ಭಯದಿಂದ ನಡುಗಲಿ. ಯೆಹೋವನ ಮಹಾ
ದಿನವು ಬರಲಿದೆ; ಯೆಹೋವನ ಮಹಾದಿನವು
ಹತ್ತಿರವೇ ಇದೆ.

2 ಆ ದಿನವು ಕರಾಳ ದಿನ. ಮೋಡದಿಂದ ತುಂಬಿದ
ದಿನವಾಗಿದೆ. ಅಂದು ಸೂರ್ಯೋದಯದ
ಸಮಯದಲ್ಲಿ ಪರ್ವತದಲ್ಲಿ ಹರಡಿದ ಸೈನ್ಯವನ್ನು
ನೀನು ನೋಡುವೆ. ಅದು ಬಲಿಷ್ಟವಾದ ಮಹಾ
ಸೈನ್ಯ. ಅಂಥ ಸೈನ್ಯವು ಹಿಂದೆಂದೂ ಇರಲಿಲ್ಲ.
ಇನ್ನು ಮುಂದೆಯೂ ಇರುವುದಿಲ್ಲ.

3 ಆ ಸೈನ್ಯವು ಸುಡುವ ಬೆಂಕಿಯಂತೆ ದೇಶವನ್ನು
ನಾಶಮಾಡುವದು. ಏದೇನ್ ತೋಟದಂತೆ
ಕಂಗೊಳಿಸುತ್ತದ್ದ ದೇಶವು ಅದು ಬಂದಮೇಲೆ
ಬೆಂಗಾಡಿನಂತಿರುವದು. ಅವರಿಂದ ಯಾರೂ
ತಪ್ಪಿಸಿಕೊಳ್ಳಲಾರರು.

4 ಅವರು ಕುದುರೆಯಂತೆ ಕಾಣುವರು, ಯುದ್ಧದ
ಕುದುರೆಯಂತೆ ಓಡುವರು.

5 ಕಿವಿಗೊಟ್ಟು ಕೇಳು. ಪರ್ವತಗಳ ಮೇಲೆ ಓಡುವ
ರಥಗಳ ಶಬ್ದದಂತೆ ಅವರ ಶಬ್ದವು ಕೇಳುತ್ತದೆ.
ಬೆಂಕಿಯ ಜ್ವಾಲೆಗಳು ಹೊಟ್ಟನ್ನು ಸುಡುವಂತೆ
ಅವರ ಶಬ್ದವು ಕೇಳುತ್ತದೆ. ಬಲಿಷ್ಠರಾದ ಅವರು
ಯುದ್ಧಕ್ಕೆ ಸಿದ್ಧರಾಗಿದ್ದಾರೆ.

6 ಈ ಸೈನ್ಯವನ್ನು ನೋಡುವ ಜನರು ಹೆದರಿ ನಡು
ಗುವರು; ಅವರ ಮುಖಗಳು ಕೆಂಗೆಡುವದು.

7 ಆ ಸೈನಿಕರು ವೇಗವಾಗಿ ಓಡುವರು; ಗೋಡೆ
ಹತ್ತುವರು. ನೇರವಾಗಿ ಮುಂದೆ ಹೋಗುವರು.
ದಾರಿಯಿಂದ ಅತ್ತಿತ್ತ ಹೋಗರು;

8 ಒಬ್ಬರ ಮೇಲೊಬ್ಬರು ಬೀಳದೆ ಪ್ರತಿಯೊಬ್ಬ ಸೈನಿ
ಕನು ತನ್ನ ದಾರಿಯಲ್ಲಿಯೇ ಮುಂದುವರಿಯು
ವನು. ಒಬ್ಬ ಸೈನಿಕನಿಗೆ ಗಾಯವಾಗಿ ಬಿದ್ದರೂ
ಉಳಿದವರು ನಿಲ್ಲದೆ ಮುಂದಕ್ಕೆ ನುಗ್ಗುತ್ತಾ
ಇರುವರು.

9 ಅವರು ಪಟ್ಟಣದ ಕಡೆಗೆ ಓಡಿ ತ್ವರೆಯಾಗಿ
ಗೋಡೆ ಹತ್ತುವರು. ಮನೆಯೊಳಗೆ ನುಗ್ಗುವರು;
ಕಳ್ಳರಂತೆ ಕಿಟಕಿಯಿಂದ ನುಸುಳುವರು.

10 ಅವರ ಮುಂದೆ ಭೂಮಿಯೂ ಆಕಾಶವೂ
ನಡುಗುವುದು; ಸೂರ್ಯಚಂದ್ರರು ಕಪ್ಪಾಗಿ
ಹೋಗುವರು; ನಕ್ಷತ್ರಗಳು ಹೊಳಪನ್ನು ಕಳೆದು
ಕೊಳ್ಳುವುದು.

11 ಯೆಹೋವನು ತನ್ನ ಸೈನ್ಯವನ್ನು ಮಹಾಧ್ವನಿ
ಯಿಂದ ಕರೆಯುತ್ತಾನೆ. ಆತನ ಶಿಬಿರವು ದೊಡ್ಡ
ದಾಗಿದೆ. ಆ ಸೈನ್ಯವು ಆತನ ಆಜ್ಞೆಯನ್ನು ಪಾಲಿಸು
ತ್ತದೆ; ಆ ಸೈನ್ಯವು ಮಹಾ ಬಲಿಷ್ಠವಾಗಿದೆ.
ಯೆಹೋವನ ಮಹಾ ದಿನವು ಮಹಾ ಭಯಂ
ಕರವಾದ ದಿನವಾಗಿದೆ. ಅದನ್ನು ಸಹಿಸಲು
ಯಾರಿಗೂ ಸಾಧ್ಯವಿಲ್ಲ.

### ಜನರು ಬದಲಾಗಬೇಕೆಂದು ಯೆಹೋವನು ಹೇಳುತ್ತಾನೆ

12 ಇದು ಯೆಹೋವನ ಸಂದೇಶ: ‘‘ನಿಮ್ಮ ಪೂರ್ಣ

ಹೃದಯದಿಂದ ನನ್ನ ಬಳಿಗೆ ಬನ್ನಿರಿ, ನೀವು
ದುಷ್ಟತ್ವವನ್ನು ನಡಿಸಿರುವದರಿಂದ ದುಃಖಿಸಿರಿ,
ಅಳಿರಿ, ಉಪವಾಸ ಮಾಡಿರಿ.
13 ನಿಮ್ಮ ಬಟ್ಟೆಗಳನ್ನಲ್ಲ, ಹೃದಯವನ್ನು ಹರಿ
ಯಿರಿ.'' ನಿಮ್ಮ ದೇವರಾದ ಯೆಹೋವನ ಬಳಿಗೆ
ಬನ್ನಿರಿ. ಆತನು ದಯಾಪರನೂ ಕನಿಕರವುಳ್ಳ
ವನೂ ಆಗಿದ್ದಾನೆ. ಆತನು ಬೇಗನೇ ಕೋಪಿಸು
ವುದಿಲ್ಲ. ಆತನಲ್ಲಿ ಆಳವಾದ ಪ್ರೀತಿ ಇದೆ. ಆತನು
ಯೋಚಿಸಿದ ಶಿಕ್ಷೆಯನ್ನು ಒಂದು ವೇಳೆ ನಿಮಗೆ
ಕೊಡದೆ ತನ್ನ ಮನಸ್ಸನ್ನು ಬದಲಾಯಿಸಾನು.
14 ಒಂದು ವೇಳೆ ಯೆಹೋವನು ತನ್ನ ಮನಸ್ಸನ್ನು
ಬದಲಾಯಿಸಿದರೂ ಬದಲಾಯಿಸಾನು,
ಹೇಳಲು ಬರುವುದಿಲ್ಲ. ಒಂದು ವೇಳೆ ಆತನು
ನಿಮಗಾಗಿ ಆಶೀರ್ವಾದವನ್ನು ಬಿಟ್ಟು ಹೋಗ
ಬಹುದು. ಆಗ ನೀನು ದೇವರಾದ ಯೆಹೋವ
ನಿಗೆ ಧಾನ್ಯ ಮತ್ತು ಪಾನ ಸಮರ್ಪಣೆ ಮಾಡುವಿ.

### ಯೆಹೋವನಿಗೆ ಪ್ರಾರ್ಥಿಸಿರಿ

15 ಚೀಯೋನಿನಲ್ಲಿ ತುತ್ತೂರಿ ಊದಿರಿ. ವಿಶೇಷ
ಕೂಟಕ್ಕಾಗಿ ಜನರನ್ನು ಕೂಡಿಸಿರಿ. ಉಪವಾಸದ
ದಿನ ಗೊತ್ತು ಮಾಡಿರಿ.
16 ವಿಶೇಷ ಕೂಟಕ್ಕಾಗಿ ಜನರನ್ನು ಒಟ್ಟಾಗಿ ಕೂಡಿ
ಸಿರಿ. ಪ್ರಾಯಸ್ಥರನ್ನು ಕೂಡಿಸಿರಿ. ಮಕ್ಕಳನ್ನೂ
ಕೂಡಿಸಿರಿ. ಮೊಲೆಹಾಲುಕುಡಿಯುವ ಶಿಶುಗ
ಳನ್ನೂ ಒಟ್ಟಾಗಿ ಸೇರಿಸಿರಿ. ವಧುವರರು ತಮ್ಮ
ಶೋಭನದ ಕೋಣೆಯಿಂದ ಹೊರಬರಲಿ.
17 ಯೆಹೋವನ ಸೇವಕರಾದ ಯಾಜಕರು ಮಂಟ
ಪಕ್ಕೂ ವೇದಿಕೆಗೂ ಮಧ್ಯದಲ್ಲಿ ಗೋಳಾಡಲಿ. ಆ
ಜನರೆಲ್ಲಾ ಹೀಗೆ ಹೇಳಬೇಕು, ''ಯೆಹೋವನೇ,
ನಿನ್ನ ಜನರ ಮೇಲೆ ಕರುಣೆ ಇಡು, ನಿನ್ನ ಜನರನ್ನು
ನಾಚಿಕೆಗೆ ತುತ್ತಾಗುವಂತೆ ಮಾಡಬೇಡ. ನಿನ್ನ
ಜನರ ವಿಷಯವಾಗಿ ಅನ್ಯಜನರು ಗೇಲಿ ಮಾಡ
ದಿರಲಿ. ಇತರ ದೇಶದ ಜನರು ನಮಗೆ ಹಾಸ್ಯ
ಮಾಡುತ್ತಾ, 'ಅವರ ದೇವರು ಎಲ್ಲಿ?' ಎಂದು
ಹೇಳದ ಹಾಗೆ ಮಾಡು.''

### ಯೆಹೋವನು ದೇಶವನ್ನು ಸುಸ್ಥಿತಿಗೆ ತರುವನು

18 ಆಗ ಯೆಹೋವನು ತನ್ನ ದೇಶದ ಬಗ್ಗೆ ಆಸಕ್ತಿ
ತೋರಿಸುವನು. ತನ್ನ ಜನರ ಬಗ್ಗೆ ದುಃಖಿಸಿದನು.
19 ಯೆಹೋವನು ತನ್ನ ಜನರೊಂದಿಗೆ ಮಾತನಾಡಿ
ಹೀಗೆ ಹೇಳಿದನು: ''ನಾನು ನಿಮಗೆ ಧಾನ್ಯ,
ದ್ರಾಕ್ಷಾರಸ, ಎಣ್ಣೆಯನ್ನು ಕಳುಹಿಸುವೆನು.
ನಿಮಗೆ ಬೇಕಾದಷ್ಟು ಇರುವದು. ಅನ್ಯ ಜನಾಂಗ
ದವರೆದುರು ನಿಮ್ಮನ್ನು ಇನ್ನು ಮುಂದೆ ನಾಚಿಕೆಗೆ
ಗುರಿಪಡಿಸುವುದಿಲ್ಲ.
20 ಉತ್ತರದಿಂದ ಬಂದ ದಂಡನ್ನು ನಿಮ್ಮ ದೇಶ
ದಿಂದ ಹೊರಡಿಸುವೆನು. ಅವರನ್ನು ಒಣ
ಬೆಂಗಾಡಿಗೆ ಕಳುಹಿಸುವೆನು. ಅವರಲ್ಲಿ ಕೆಲವರು
ಪೂರ್ವದ ಸಮುದ್ರಕ್ಕೆ ಹೋಗುವರು, ಕೆಲವರು
ಪಶ್ಚಿಮದ ಸಮುದ್ರಕ್ಕೆ ಹೋಗುವರು. ಅವರು
ಭಯಂಕರ ಕೃತ್ಯಗಳನ್ನು ಮಾಡಿದುದರಿಂದ ಸತ್ತು
ಕೊಳೆಯುವ ಸ್ಥಿತಿಗೆ ಬರಮಾಡುವೆನು. ಆಗ
ಭಯಂಕರ ಹೊಲಸು ವಾಸನೆ ಇರುವದು.''

### ದೇಶವು ಹೊಸತಾಗಿ ಮಾಡಲ್ಪಡುವದು

21 ದೇಶವೇ, ಭಯಪಡದಿರು. ಯೆಹೋವನು
ಮಹತ್ಕಾರ್ಯವನ್ನು ಮಾಡಲಿಕ್ಕಿರುವದರಿಂದ
ಸಂತೋಷದಿಂದ ಆನಂದಿಸು.
22 ಅಡವಿಯಲ್ಲಿರುವ ಪ್ರಾಣಿಗಳೇ, ಭಯಪಡ
ಬೇಡಿ. ಮರುಭೂಮಿಯು ಹುಲ್ಲುಗಾವಲಾಗು
ವದು. ಮರಗಳು ಹಣ್ಣುಗಳನ್ನು ಬಿಡುವವು.
ಅಂಜೂರದ ಮರಗಳೂ ದ್ರಾಕ್ಷಿಬಳ್ಳಿಗಳೂ
ತುಂಬಾ ಹಣ್ಣುಗಳನ್ನು ಬಿಡುವವು.
23 ಆದುದರಿಂದ ಚೀಯೋನಿನ ಜನರೇ,
ಸಂತೋಷಪಡಿರಿ. ನಿಮ್ಮ ದೇವರಾದ
ಯೆಹೋವನಲ್ಲಿ ಸಂತೋಷಿಸಿರಿ. ಆತನು ನಿಮಗೆ
ಮಳೆ ಸುರಿಸುವನು. ಹಿಂದಿನಂತೆ ನಿಮಗೆ
ಮುಂಗಾರು, ಹಿಂಗಾರು ಮಳೆಗಳನ್ನು
ಸುರಿಸುವನು.
24 ಕಣಜಗಳು ಗೋಧಿಯಿಂದ ತುಂಬಿರುವವು.
ಪಿಪಾಯಿಗಳು ಎಣ್ಣೆಯಿಂದಲೂ, ದ್ರಾಕ್ಷಾರಸ
ದಿಂದಲೂ ತುಂಬಿತುಳುಕುವವು.
25 ''ಯೆಹೋವನಾದ ನಾನು ನಿಮಗೆ ವಿರುದ್ಧವಾಗಿ
ನನ್ನ ಸೈನ್ಯವನ್ನು ಕಳುಹಿಸಿದೆನು. ಮಿಡಿತೆಗಳ
ಗುಂಪು, ದೊಡ್ಡ ಮಿಡಿತೆ, ನಾಶಮಾಡುವ
ಮಿಡಿತೆ, ಹಾರುವ ಮಿಡಿತೆ, ಚೂರಿ ಮಿಡಿತೆಗಳು
ಬಂದು ನಿಮಗಿದ್ದುದ್ದನ್ನೆಲ್ಲಾ ತಿಂದುಬಿಟ್ಟವು.
ಆದರೆ ಯೆಹೋವನಾದ ನಾನು ನಿಮ್ಮ ಸಂಕಟ
ಕಾಲಕ್ಕೆ ಬದಲಾಗಿ ಸುಭಿಕ್ಷಕಾಲವನ್ನು ದಯ
ಪಾಲಿಸುವೆನು.
26 ಆಗ ನಿಮಗೆ ತಿನ್ನಲು ಏನೂ ಕಡಿಮೆ ಇರು
ವುದಿಲ್ಲ. ನೀವು ಸಂತೃಪ್ತರಾಗುವಿರಿ. ನಿಮ್ಮ
ದೇವರಾದ ಯೆಹೋವನ ನಾಮವನ್ನು

ಕೊಂಡಾಡುವಿರಿ. ಆತನು ನಿಮಗೆ ಆಶ್ಚರ್ಯ
ವಾದ ಕಾರ್ಯವನ್ನು ಮಾಡಿದ್ದಾನೆ. ನನ್ನ ಜನರು
ಇನ್ನು ಮುಂದೆ ಎಂದೂ ನಾಚಿಕೆಗೆ ಗುರಿ
ಯಾಗರು.
27 ಇಸ್ರೇಲರೊಂದಿಗೆ ನಾನು ಇದ್ದೇನೆ ಎಂದು ನೀವು
ತಿಳಿಯುವಿರಿ. ನಿಮ್ಮ ದೇವರಾದ ಯೆಹೋವನು
ನಾನೇ ಎಂದು ನೀವು ತಿಳಿಯುವಿರಿ. ನನ್ನ
ಹೊರತು ಬೇರೆ ದೇವರುಗಳಿಲ್ಲ. ನನ್ನ ಜನರು
ಇನ್ನು ಮುಂದೆ ನಾಚಿಕೆಗೆ ಗುರಿಯಾಗುವುದಿಲ್ಲ.

## ದೇವರು ಎಲ್ಲಾ ಜನರ ಮೇಲೆ ತನ್ನ ಆತ್ಮವನ್ನು ಸುರಿಸುವನು

28 ‘‘ಆ ಬಳಿಕ ನಾನು ನನ್ನ ಆತ್ಮವನ್ನು ಎಲ್ಲಾ ತರದ
ಜನರ ಮೇಲೆ ಸುರಿಸುವೆನು. ನಿಮ್ಮ ಗಂಡು ಹೆಣ್ಣು
ಮಕ್ಕಳು ಪ್ರವಾದಿಸುವರು. ನಿಮ್ಮ ವೃದ್ಧರು ಕನಸು
ಕಾಣುವರು. ನಿಮ್ಮ ಯುವಕರಿಗೆ ದರ್ಶನಗ
ಳಾಗುವವು.
29 ಆ ಸಮಯದಲ್ಲಿ ಸೇವಕ ಸೇವಕಿಯರ
ಮೇಲೆಯೂ ನನ್ನ ಆತ್ಮವನ್ನು ಸುರಿಸುವೆನು.
30 ಭೂಮಿ ಆಕಾಶಗಳಲ್ಲಿ ವಿಚಿತ್ರ ಸಂಗತಿಗಳನ್ನು
ನಾನು ತೋರಿಸುವೆನು. ಅಲ್ಲಿ ರಕ್ತ, ಬೆಂಕಿ ಮತ್ತು
ದಪ್ಪದ ಹೊಗೆಯು ಇರುವದು.
31 ಸೂರ್ಯನು ಕತ್ತಲಾಗುವನು, ಚಂದ್ರನು ರಕ್ತ
ದಂತಾಗುವನು. ಆಗ ಯೆಹೋವನ ಭಯಂಕರ
ದಿನವು ಬರುವುದು.
32 ಆಗ ಯೆಹೋವನ ಹೆಸರನ್ನು ಹೇಳಿಕೊಳ್ಳುವವ
ರೆಲ್ಲರೂ ರಕ್ಷಿಸಲ್ಪಡುವರು. ಚೀಯೋನ್
ಪರ್ವತದಲ್ಲಿಯೂ ಜೆರುಸಲೇಮಿನಲ್ಲಿಯೂ
ರಕ್ಷಿಸಲ್ಪಟ್ಟ ಜನರಿರುವರು. ಯೆಹೋವನು
ಹೇಳಿದ ಪ್ರಕಾರವೇ ಇದು ಆಗುವುದು. ಉಳಿದ
ಜನರಲ್ಲಿ ಯೆಹೋವನು ಕರೆದಿರುವ ಜನರು
ಸೇರಿಕೊಂಡಿರುವರು.

## ಯೆಹೂದದ ವೈರಿಗೆ ಯೆಹೋವನ ಶಿಕ್ಷೆಯ ವಾಗ್ದಾನ

3 ‘‘ಆ ಸಮಯದಲ್ಲಿ ನಾನು ಯೆಹೂದ ಮತ್ತು ಜೆರುಸ
ಲೇಮನ್ನು ಸೆರೆಯಿಂದ ಹಿಂದಕ್ಕೆ ತರಿಸುವೆನು.
2ಮತ್ತು ಎಲ್ಲಾ ಜನಾಂಗಗಳನ್ನು ನಾನು ಒಟ್ಟುಗೂಡಿಸು
ವೆನು. ಆ ದೇಶಗಳನ್ನು ಯೆಹೋಷಾಫಾಟ್ ತಗ್ಗಿಗೆ ಕರೆ
ತರುವೆನು. ಅಲ್ಲಿ ಅವರಿಗೆ ನ್ಯಾಯತೀರಿಸುವೆನು. ಆ ದೇಶ
ಗಳವರು ನನ್ನ ಜನರಾದ ಇಸ್ರೇಲರನ್ನು ಚದರಿಸಿದ್ದರು.
ಅವರನ್ನು ಪರದೇಶಗಳಲ್ಲಿ ವಾಸಿಸುವಂತೆ ಮಾಡಿದರು.
ಆದುದರಿಂದ ಆ ದೇಶಗಳವರನ್ನು ನಾನು ಶಿಕ್ಷಿಸುವೆನು.
ಆ ದೇಶದವರು ನನ್ನ ದೇಶವನ್ನು ವಿಭಜಿಸಿದರು. 3ನನ್ನ
ಜನರಿಗಾಗಿ ಚೀಟು ಹಾಕಿದರು. ಒಂದು ಹುಡುಗನನ್ನು
ಮಾರಿ ಸೂಳೆಯನ್ನು ಕೊಂಡುಕೊಂಡರು. ಅವರು
ದ್ರಾಕ್ಷಾರಸವನ್ನು ಕುಡಿಯುವದಕ್ಕಾಗಿ ಹುಡುಗಿಯನ್ನು
ಮಾರಿದರು.
4‘‘ತೂರೇ, ಸೀದೋನೇ, ಫಿಲಿಷ್ಟಿಯ ದೇಶಗಳೇ,
ನೀವು ನನಗೆ ಎಷ್ಟರವರು? ನಾನು ಮಾಡಿದುದಕ್ಕೆ ನೀವು
ನನ್ನನ್ನು ಶಿಕ್ಷಿಸುತ್ತೀರಾ? ನೀವು ಒಂದು ವೇಳೆ ನನ್ನನ್ನು
ಶಿಕ್ಷಿಸುತ್ತಿದ್ದೀರಿ ಎಂದು ನೆನಸಬಹುದು. ಆದರೆ ನಾನು
ಬೇಗನೇ ನಿಮ್ಮನ್ನು ಶಿಕ್ಷಿಸುವೆನು. 5ನೀವು ನನ್ನ ಬೆಳ್ಳಿ
ಬಂಗಾರವನ್ನು ಕದ್ದುಕೊಂಡು ಹೋದಿರಿ. ನನ್ನ
ಅಮೂಲ್ಯವಾದ ಸಂಪತ್ತನ್ನು ಕೊಂಡು ಹೋಗಿ ನಿಮ್ಮ
ಪೂಜಾಸ್ಥಳಗಳಲ್ಲಿ ಇಟ್ಟಿರಿ.
6‘‘ನೀವು ಯೆಹೂದ ಮತ್ತು ಜೆರುಸಲೇಮಿನ ಜನರನ್ನು
ಗ್ರೀಕರಿಗೆ ಮಾರಿಬಿಟ್ಟಿರಿ. ಆ ರೀತಿಯಾಗಿ ಅವರನ್ನು ಅವರ
ದೇಶದಿಂದ ಬಹಳ ದೂರ ತೆಗೆದುಬಿಟ್ಟಿರಿ. 7ಆ ದೂರದ
ಸ್ಥಳಗಳಿಗೆ ನನ್ನ ಜನರನ್ನು ಕಳುಹಿಸಿದಿರಿ. ಆದರೆ ನಾನು
ಅವರನ್ನು ಹಿಂದೆ ತರುವೆನು. ಮತ್ತು ನೀನು ಮಾಡಿದ
ಕೃತ್ಯಕ್ಕೆ ನಾನು ನಿನ್ನನ್ನು ಶಿಕ್ಷಿಸುವೆನು. 8ನಿನ್ನ ಗಂಡು ಹೆಣ್ಣು
ಮಕ್ಕಳನ್ನು ನಾನು ಯೆಹೂದದ ಜನರಿಗೆ ಮಾರುವೆನು.
ಅವರು ಅವರನ್ನು ಬಹುದೂರದಲ್ಲಿ ಶೆಬದ ಜನರಿಗೆ
ಮಾರಿಬಿಡುವರು.’’ ಇದು ಯೆಹೋವನ ನುಡಿ.

## ಯುದ್ಧಕ್ಕೆ ತಯಾರಾಗು

9 ಜನಾಂಗದವರಿಗೆ ಇದನ್ನು ಪ್ರಕಟಿಸು, ‘ಯುದ್ಧಕ್ಕೆ
ತಯಾರಾಗಿರಿ’ ಶೂರರನ್ನು ಎಚ್ಚರಿಸಿರಿ. ಯುದ್ಧ
ವೀರರು ಹತ್ತಿರಕ್ಕೆ ಬರಲಿ; ಅವರು ಬರಲಿ!
10 ನಿಮ್ಮ ನೇಗಿಲ ಗುಳಗಳನ್ನು ಕತ್ತಿಯನ್ನಾಗಿ
ಮಾಡಿರಿ. ಕುಡುಗೋಲುಗಳಿಂದ ಬರ್ಜಿಯನ್ನು
ಮಾಡಿರಿ, ನಿಮ್ಮ ಬಲಹೀನನಾದ ಸೈನಿಕನು,
‘ನಾನು ಬಲಶಾಲಿ’ ಅನ್ನಲಿ.
11 ಎಲ್ಲಾ ಜನಾಂಗದವರೇ, ತ್ವರೆಪಡಿರಿ. ಆ ಸ್ಥಳದಲ್ಲಿ
ಒಟ್ಟು ಸೇರಿರಿ. ಯೆಹೋವನೇ, ನಿನ್ನ ಬಲಶಾಲಿ
ಯಾದ ಸೈನಿಕರನ್ನು ಬರಮಾಡು.
12 ಜನಾಂಗಗಳೇ, ಎಚ್ಚರಗೊಳ್ಳಿರಿ! ಯೆಹೋಷಾ
ಫಾಟ್ ತಗ್ಗಿಗೆ ಬನ್ನಿರಿ. ಸುತ್ತಲಿರುವ ಜನಾಂಗಗ
ಳಿಗೆ ತೀರ್ಪುಕೊಡಲು ನಾನು ಅಲ್ಲಿ ಕುಳಿತು
ಕೊಳ್ಳುವೆನು.
13 ಬೆಳೆಯು ಪಕ್ವವಾಗಿದೆ; ಕುಡುಗೋಲನ್ನು ತನ್ನಿರಿ.
ಬನ್ನಿ, ದ್ರಾಕ್ಷಿಯನ್ನು ಆಲೆಯಲ್ಲಿ ತುಳಿಯಿರಿ,
ಯಾಕೆಂದರೆ ಆಲೆಯು ತುಂಬಿಹೋಗಿದೆ.
ಪೀಪಾಯಿಗಳು ತುಂಬಿ ತುಳುಕುತ್ತಿವೆ,

ಯಾಕೆಂದರೆ ಅವರ ದುಷ್ಟತ್ವವು ವಿಪರೀತ
ವಾಗಿದೆ!
14 ತೀರ್ಮಾನದ ತಗ್ಗಿನಲ್ಲಿ ಅನೇಕರು ಸೇರಿದ್ದಾರೆ.
ಯೆಹೋವನ ವಿಶೇಷ ದಿನವು ತೀರ್ಮಾನದ
ತಗ್ಗಿನ ಹತ್ತಿರ ಬಂದಿದೆ.
15 ಸೂರ್ಯ ಚಂದ್ರರು ಕತ್ತಲಾಗುವರು, ನಕ್ಷತ್ರ
ಗಳು ಹೊಳೆಯುವುದಿಲ್ಲ.
16 ಚೀಯೋನಿನಿಂದ ದೇವರಾದ ಯೆಹೋವನು
ಆರ್ಭಟಿಸುವನು. ಜೆರುಸಲೇಮಿನಿಂದ ಆತನು
ಗರ್ಜಿಸುವನು. ಆಗ ಭೂಮ್ಯಾಕಾಶಗಳು ನಡು
ಗುವವು. ಆದರೆ ಯೆಹೋವನ ಜನರಿಗೆ ಆತನೇ
ಆಶ್ರಯ ಸ್ಥಳವಾಗುವನು. ಆತನು ಇಸ್ರೇಲರಿಗೆ
ಸುರಕ್ಷಿತ ಸ್ಥಳವಾಗುವನು.
17 ‘‘ಆಗ ನಾನು ನಿಮ್ಮ ದೇವರಾದ ಯೆಹೋವನು
ಎಂದು ಅರಿತುಕೊಳ್ಳುವಿರಿ. ನಾನು ನನ್ನ ಪವಿತ್ರ
ಪರ್ವತವಾದ ಚೀಯೋನಿನಲ್ಲಿ ವಾಸಿಸುವೆನು.
ಜೆರುಸಲೇಮ್ ಪರಿಶುದ್ಧವಾಗುವದು. ಪರ
ದೇಶಿಗಳು ಇನ್ನು ಮುಂದೆ ಅದನ್ನು ದಾಟಿ
ಹೋಗುವುದಿಲ್ಲ.’’

**ಯೆಹೂದಕ್ಕೆ ಒಂದು ಹೊಸ ಜೀವಿತದ ವಾಗ್ದಾನ**

18 ‘‘ಆ ದಿವಸ ಸಿಹಿ ದ್ರಾಕ್ಷಾರಸವು ಬೆಟ್ಟಗಳಿಂದ ಹರಿ
ಯುವುದು. ಬೆಟ್ಟಗಳಲ್ಲಿ ಹಾಲು ಹರಿಯು
ವುದು. ಮತ್ತು ಯೆಹೂದದ ಬತ್ತಿದ ನದಿಗಳಲ್ಲಿ
ನೀರು ತುಂಬಿ ಹರಿಯುವದು. ಯೆಹೋವನ
ಆಲಯದಿಂದ ಬುಗ್ಗೆಯು ಹೊರಡುವದು.
ಅಕಾಶಿಯ ಕಣಿವೆಗೆ ನೀರನ್ನು ಕೊಡುವದು.
19 ಈಜಿಪ್ಟ್ ಬರಿದಾಗುವದು. ಎದೋಮು ಬೆಂಗಾ
ಡಾಗುವದು. ಯಾಕೆಂದರೆ ಅವರು ಯೆಹೂದದ
ಜನರೊಂದಿಗೆ ಕ್ರೂರರೀತಿಯಲ್ಲಿ ವರ್ತಿಸಿದರು.
ಅವರ ದೇಶಗಳಲ್ಲಿ ನಿರಪರಾಧಿಗಳನ್ನು
ಕೊಂದರು.
20 ಆದರೆ ಯೆಹೂದದಲ್ಲಿ ಯಾವಾಗಲೂ ಜನರು
ವಾಸಿಸುವರು. ಅನೇಕ ತಲೆಮಾರಿನವರೆಗೆ
ಜನರು ಜೆರುಸಲೇಮಿನಲ್ಲಿ ವಾಸಿಸುವರು.
21 ಆ ಜನರು ನನ್ನ ಜನರನ್ನು ಕೊಂದರು. ಆದುದ
ರಿಂದ ನಾನು ನಿಜವಾಗಿಯೂ ಅವರನ್ನು ಶಿಕ್ಷಿಸು
ವೆನು.’’ ಯಾಕೆಂದರೆ ದೇವರಾದ ಯೆಹೋ
ವನು ಚೀಯೋನಿನಲ್ಲಿ ವಾಸಿಸುವನು.

# License Agreement for Bible Texts

***World Bible Translation Center***
***Last Updated: September 21, 2006***

Copyright © 2006 by World Bible Translation Center
All rights reserved.

**These Scriptures:**

- Are copyrighted by World Bible Translation Center.
- Are not public domain.
- May not be altered or modified in any form.
- May not be sold or offered for sale in any form.
- May not be used for commercial purposes (including, but not limited to, use in advertising or Web banners used for the purpose of selling online add space).
- May be distributed without modification in electronic form for non-commercial use. However, they may not be hosted on any kind of server (including a Web or ftp server) without written permission. A copy of this license (without modification) must also be included.
- May be quoted for any purpose, up to 1,000 verses, without written permission. However, the extent of quotation must not comprise a complete book nor should it amount to more than 50% of the work in which it is quoted. A copyright notice must appear on the title or copyright page using this pattern: "Taken from the HOLY BIBLE: EASY-TO-READ VERSION™ © 2006 by World Bible Translation Center, Inc. and used by permission." If the text quoted is from one of WBTC's non-English versions, the printed title of the actual text quoted will be substituted for "HOLY BIBLE: EASY-TO-READ VERSION™." The copyright notice must appear in English or be translated into another language. When quotations from WBTC's text are used in non-saleable media, such as church bulletins, orders of service, posters, transparencies or similar media, a complete copyright notice is not required, but the initials of the version (such as "ERV" for the Easy-to-Read Version™ in English) must appear at the end of each quotation.

Any use of these Scriptures other than those listed above is prohibited. For additional rights and permission for usage, such as the use of WBTC's text on a Web site, or for clarification of any of the above, please contact World Bible Translation Center in writing or by email at distribution@wbtc.com.

World Bible Translation Center
P.O. Box 820648
Fort Worth, Texas 76182, USA
Telephone: 1-817-595-1664
Toll-Free in US: 1-888-54-BIBLE
E-mail: info@wbtc.com

**WBTC's web site –** World Bible Translation Center's web site: http://www.wbtc.org

**Order online –** To order a copy of our texts online, go to: http://www.wbtc.org

**Current license agreement –** *This license is subject to change without notice. The current license can be found at:* http://www.wbtc.org/downloads/biblelicense.htm

**Trouble viewing this file –** If the text in this document does not display correctly, use Adobe Acrobat Reader 5.0 or higher. Download Adobe Acrobat Reader from:
http://www.adobe.com/products/acrobat/readstep2.html

**Viewing Chinese or Korean PDFs –** To view the Chinese or Korean PDFs, it may be necessary to download the Chinese Simplified or Korean font pack from Adobe. Download the font packs from:
http://www.adobe.com/products/acrobat/acrrasianfontpack.html